# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 904 (ಕೃಷಿ ಇಲಾಖೆಯಿಂದ ವರ್ಗಾವಣೆಗೊಂಡ) |
| ಸದಸ್ಯರ ಹೆಸರು | ಶ್ರೀ ಮುನಿರಾಜುಗೌಡ ಪಿ.ಎಂ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.07.2023 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ನಕಲಿ ಬೋನಫೈಡ್ ಸರ್ಟಿಫಿಕೇಟ್ ಸೃಷ್ಟಿಸಿಕೊಂಡು ಸರ್ಕಾರಕ್ಕೆ ತೆರಿಗೆ ವಂಚನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ನಕಲಿ ಬೋನಫೈಡ್ ಸರ್ಟಿಫಿಕೇಟ್‌ನ ಎಷ್ಟು ಪ್ರಕರಣಗಳು ರಾಜ್ಯದಲ್ಲಿ ದಾಖಲಾಗಿದೆ: (ಜಿಲ್ಲಾವಾರು ವಿವರ ನೀಡುವುದು) | ಬಂದಿದೆ.<br><br>ಕೋಲಾರ ಜಿಲ್ಲೆಯ ಕೋಲಾರ ತಾಲ್ಲೂಕಿನ ನರಸಾಪುರ ಹೋಬಳಿಯಲ್ಲಿ 2023-24ನೇ ಸಾಲಿನಲ್ಲಿ ಒಟ್ಟು 370 ಪ್ರಕರಣಗಳು ದಾಖಲಾಗಿರುತ್ತವೆ. ಇನ್ನುಳಿದಂತೆ, ಬೇರೆ ಜಿಲ್ಲೆಗಳಲ್ಲಿ ನಕಲಿ ಬೋನಫೈಡ್ ಸರ್ಟಿಫಿಕೇಟ್ ಸೃಷ್ಟಿಸಿರುವ ಕುರಿತು ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. |
| ಆ) | ನಕಲಿ ಬೋನಫೈಡ್ . ಸರ್ಟಿಫಿಕೇಟ್ ಮಾಡಿಕೊಟ್ಟ ಮತ್ತು ಸದರಿ ದಾಖಲೆಗಳನ್ನು ಪರಿಶೀಲಿಸದೆ ನೋಂದಣಿ ಮಾಡಿದ ಅಧಿಕಾರಿಗಳು ಯಾರು; ಸದರಿ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು: (ವಿವರ ನೀಡುವುದು) | ಕೋಲಾರ ಜಿಲ್ಲೆ ಶ್ರೀನಿವಾಸಪುರ ತಾಲ್ಲೂಕಿನ ಯಲ್ಲೂರು ಹೋಬಳಿಗೆ ಸಂಬಂಧಿಸಿದಂತೆ 2019-20, 2020-21 ಹಾಗೂ 2021- 22 ನೇ ಸಾಲಿನಲ್ಲಿ ನಕಲಿ ಬೋನಫೈಡ್ ಸರ್ಟಿಫಿಕೇಟ್ ವಿತರಿಸಿರುವುದರಿಂದ ಶ್ರೀ. ಕೆ.ಎನ್. ರಮೇಶ್ ಬಿನ್ ಲೇಟ್ ನಂಜುಂಡಪ್ಪ, ವೆಂಕಟೇಶ್ವರ ಬಡಾವಣೆ, ಶ್ರೀನಿವಾಸಪುರ ಟೌನ್ ಇವರು ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ರವರಿಗೆ ದೂರು ಅರ್ಜಿ ಸಲ್ಲಿಸಿದ್ದು, ಪ್ರಕರಣ ವಿಚಾರಣೆ ಹಂತದಲ್ಲಿರುತ್ತದೆ.<br><br>2023-24ನೇ ಸಾಲಿನಲ್ಲಿ ನರಸಾಪುರ ಹೋಬಳಿಯಲ್ಲಿ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಶ್ರೀ ನಾರಾಯಣಸ್ವಾಮಿ ನಿವೃತ್ತ ಉಪ ತಹಶೀಲ್ದಾರ್, ನಾಡ ಕಛೇರಿ, ನರಸಾಪುರ ಹೋಬಳಿ ಇವರ ವಿರುದ್ಧ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು (ಪ್ರಕರಣ ಸಂಖ್ಯೆ: ಸಿಸಿಎ/ಸಿಆರ್/07/2023), ದಿನಾಂಕ:06/01/2024 ರಂದು ಸದರಿ ಪ್ರಕರಣವನ್ನು ವಿಚಾರಣೆ ನಡೆಸಲು ಅಪರ ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ ರವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಿದ್ದು, ಸದರಿ ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ ಹಾಗೂ ಹೊರಗುತ್ತಿಗೆ ಡಾಟಾ ಎಂಟ್ರಿ ಆಪರೇಟರ್ ಶ್ರೀಮತಿ ಅಂಬುಜ ರವರ ವಿರುದ್ಧ ಪತ್ರ ಸಂಖ್ಯೆ:ಸಿಬ್ಬಂದಿ/ಸಿಆರ್17/2023-24, ದಿನಾಂಕ: 29/09/2023 ರನ್ವಯ ಕಾನೂನು ರೀತ್ಯಾ ಕ್ರಮಕೈಗೊಳ್ಳುವ ಬಗ್ಗೆ ಪೊಲೀಸ್ ವೃತ್ತ ನಿರೀಕ್ಷಕರು, ವೇಮಗಲ್ ಪೋಲೀಸ್ ಠಾಣೆ, ಕೋಲಾರ ಇವರಿಗೆ ಪತ್ರ ಬರೆಯಲಾಗಿರುತ್ತದೆ. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಇ) | ಸಚಿವರ ಜಮೀನುಗಳ ಸರ್ವೆ ನಂಬರ್ ಸಹ ಬಳಸಿ ನಕಲಿ ಬೋನಫೈಡ್ ಸರ್ಟಿಫಿಕೇಟ್ ವಿತರಿಸಲಾಗಿದೆಯೇ; ಹಾಗಿದ್ದಲ್ಲಿ ಈ ಕುರಿತು ಸಂಬಂಧಪಟ್ಟವರ ಮೇಲೆ ದೂರು ನೀಡಿದ್ದಾರೆಯೇ: ನೀಡಿದ್ದಲ್ಲಿ, ಅದಕ್ಕೆ ಕಾರಣವೇನು: | ಹೌದು.<br><br>ಕೋಲಾರ ಜಿಲ್ಲೆಯ, ನರಸಾಪುರ ಹೋಬಳಿಯಲ್ಲಿ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಶ್ರೀ ನಾರಾಯಣಸ್ವಾಮಿ ನಿವೃತ್ತ ಉಪ ತಹಶೀಲ್ದಾರ್, ನಾಡಕಛೇರಿ, ನರಸಾಪುರ ಹೋಬಳಿ ಇವರ ವಿರುದ್ಧ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರು ಸಿಸಿಎ ಪ್ರಕರಣವನ್ನು ದಾಖಲಿಸಿಕೊಂಡಿದ್ದು (ಪ್ರಕರಣ ಸಂಖ್ಯೆ:ಸಿಸಿಎ/ಸಿಆರ್/07/2023), ದಿನಾಂಕ:06/01/2024ರಂದು ಸದರಿ ಪ್ರಕರಣವನ್ನು ವಿಚಾರಣೆ ನಡೆಸಲು ಅಪರ ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ ರವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಿದ್ದು, ಸದರಿ ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ. |
| ಈ) | ಭವಿಷ್ಯದಲ್ಲಿ ಈ ರೀತಿಯ ನಕಲು ಪ್ರಕರಣ ಮರುಕಳಿಸದಂತೆ ಸರ್ಕಾರ ಕೈಗೊಂಡ ಕ್ರಮಗಳೇನು? | ನಕಲಿ ಬೋನಫೈಡ್ ಸರ್ಟಿಫಿಕೇಟ್ ವಿತರಣೆಯಾಗಲು ಸಂಬಂಧಿಸಿದ ಅಧಿಕಾರಿ/ನೌಕರರುಗಳ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುತ್ತದೆ. |

**ಸಂಖ್ಯೆ: ಕಂಇ 52 ಎಜೆಎಸ್ 2023**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು